ಸಚಿವರು) : ಮಾನ್ಯ ಅಧ್ಯಕ್ಷರೆ, ಚುಕ್ಕೆ ಗುರುತಿಲ್ಲದ ಪ್ರಶ್ನೆಗಳ ಹದಿನಾಲ್ಕನೇ ಪಟ್ಟಿಯಲ್ಲಿರುವ 210 ಪ್ರಶ್ನೆಗಳ ಪೈಕಿ 192 ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡುವ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

(ಅನುಬಂಧ–I) (ಭಾಗ–II)

5. ಚುನಾವಣಾ ಪ್ರಸ್ತಾವ

ವಿಷಯ: ವಿಧಾನಮಂಡಲದ ಸ್ಥಾಯಿ ಸಮಿತಿಗಳ ರಚನೆ

ಶ್ರೀ ಟಿ. ಬಿ. ಜಯಚಂದ್ರ (ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು) : ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 265(1)ನೇ ನಿಯಮದ ಅನುಸಾರವಾಗಿ ಈ ಸಭೆಯು ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 268(1)ನೇ ನಿಯಮದ ಅನುಸಾರವಾಗಿ ಈ ಸಭೆಯು ಅಂದಾಜುಗಳ ಸಮಿತಿಗೆ ಹದಿನೆಂಟು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 271(1)ನೇ ನಿಯಮದ ಅನುಸಾರವಾಗಿ ಈ ಸಭೆಯು ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 272(1)ನೇ ನಿಯಮದ ಅನುಸಾರವಾಗಿ ಈ ಸಭೆಯು ಹಕ್ಕುಬಾಧ್ಯತೆಗಳ ಸಮಿತಿಗೆ ಒಂಭತ್ತು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 277(1)ನೇ ನಿಯಮದ ಅನುಸಾರವಾಗಿ ಈ ಸಭೆಯು ಅಧೀನ ಶಾಸನ ರಚನಾ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 281(1)ನೇ ನಿಯಮದ ಅನುಸಾರವಾಗಿ ಈ ಸಭೆಯು ಸರ್ಕಾರಿ ಭರವಸೆಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 283(1)ನೇ ನಿಯಮದ ಅನುಸಾರವಾಗಿ ಈ ಸಭೆಯು ಸದಸ್ಯರುಗಳ ಖಾಸಗಿ ವಿಧೇಯಗಳ ಹಾಗೂ ನಿರ್ಣಯಗಳ ಸಮಿತಿಗೆ ಹತ್ತು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 286(1)ನೇ ನಿಯಮದ ಅನುಸಾರವಾಗಿ ಈ ಸಭೆಯು ಅನುಸೂಚಿತ ಪಂಗಡಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 288(1)ನೇ ನಿಯಮದ ಅನುಸಾರವಾಗಿ ಈ ಸಭೆಯು ಹಿಂದುಳಿದ ಹಕ್ಕು ಬಾಧ್ಯತೆಗಳ ಸಮಿತಿಗೆ ಒಂಭತ್ತು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 370(2)ನೇ ನಿಯಮದ ಅನುಸಾರವಾಗಿ ಈ ಸಭೆಯು ಸದನ ಸಮಿತಿ (ವಸತಿ ಸೌಕರ್ಯಗಳ ಸಮಿತಿ)ಗೆ ಹನ್ನೆರಡು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು : ಪ್ರಸ್ತಾವವನ್ನು ಸೂಚಿಸಲಾಯಿತು. ಈಗ ಶೂನ್ಯ ವೇಳೆಯನ್ನು ತೆಗೆದುಕೊಳ್ಳೋಣ.

6. ಸಭಾಧ್ಯಕ್ಷರ ಆದೇಶದ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು

i) ವಿಷಯ : ಬೆಳಗಾವಿಯಲ್ಲಿ ಕೆ.ಎ.ಟಿ. ಪೀಠವನ್ನು ಸ್ಥಾಪನೆ ಮಾಡುವ ಬಗ್ಗೆ

ಶ್ರೀ ಪಿ.ಎಂ. ಅಶೋಕ : ಮಾನ್ಯ ಅಧ್ಯಕ್ಷರೆ, ಇದು ಬಹಳ ಮುಖ್ಯವಾದ ವಿಚಾರ. ಧಾರವಾಡದಲ್ಲಿ High Court ಮಾಡಿದ್ದೀರಿ. ಬೆಳಗಾವಿ ಡಿವಿಷನ್‌ನಲ್ಲಿ ಕೆ.ಎ.ಟಿ. ಮಾಡಬೇಕೆಂದು ಹೇಳಿ ವಕೀಲರುಗಳೆಲ್ಲಾ ಬೆಳಿಗ್ಗೆಯಿಂದ ಎಲ್ಲಾ ಶಾಸಕರ ಮನೆಗಳ ಮನೆ ಮುಂದೆ ಸತ್ಯಾಗ್ರಹ ಕುಳಿತಿದ್ದಾರೆ. ಮಾನ್ಯ ಕಾನೂನು ಸಚಿವರು ಕಳೆದ ಸಾರಿ ಬೆಳಗಾವಿಗೆ ಬಂದಾಗ ಭರವಸೆಯೊಂದನ್ನು ನೀಡಿದ್ದರು. ಆದಕಾರಣ ಬೆಳಗಾಂ ಜಿಲ್ಲೆಯಲ್ಲಿ ಕೆ.ಎ.ಟಿ. ಮಾಡುತ್ತೇನೆಂದು ಹೇಳಿ Law Minister clarification ನೀಡಿದರೆ ಎಲ್ಲರೂ strike ಅನ್ನು withdraw ಮಾಡುತ್ತಾರೆ.

ಅಧ್ಯಕ್ಷರು : ಹೇಳಿ.

ಶ್ರೀ ಲಕ್ಷ್ಮಣ ಸಂಗಪ್ಪ ಸವದಿ : ನಿನ್ನೆ ವಿಧಾನ ಪರಿಷತ್‌ನಲ್ಲಿ ಮಾನ್ಯ ಸದಸ್ಯರಿಬ್ಬರು ಪ್ರಶ್ನೆಯನ್ನು ಕೇಳಿದ್ದಾರೆ. ಆಡಳಿತಕ್ಕೆ ಸಂಬಂಧಿಸಿದಂತೆ ಕೆ.ಎ.ಟಿ. ಯನ್ನು ಉತ್ತರ ಕರ್ನಾಟಕದ ಬೆಳಗಾವಿಯಲ್ಲಿ ಸ್ಥಾಪನೆ ಮಾಡಿದರೆ ಹೇಗೆ ಎಂದು ಮಾನ್ಯ ಮುಖ್ಯಮಂತ್ರಿಯವರಿಗೆ ಒಂದು ಪ್ರಶ್ನೆಯನ್ನು ಕಳುಹಿಸಿಕೊಟ್ಟಿದ್ದು, ಅದಕ್ಕೆ ಮಾನ್ಯ ಮುಖ್ಯಮಂತ್ರಿಗಳ ಭರವಸೆಯನ್ನು ನೀಡಿದ್ದಾರೆ. ಮುಂದಿನ ದಿನಮಾನಗಳಲ್ಲಿ ಬೆಳಗಾವಿಯಲ್ಲಿ ಕೆ.ಎ.ಟಿ.ಯೊಂದನ್ನು ಪ್ರಾರಂಭ ಮಾಡುತ್ತೇವೆಂಬ ಹೇಳಿಕೆಯನ್ನು ನೀಡಿದರು. ಕೆ.ಎ.ಟಿ. ಬರುತ್ತದೆಂಬ ಕಾರಣದಿಂದ ಬೆಳಗಾವಿ ಜಿಲ್ಲೆ ಪೂರ್ತಿ ಸಂತೋಷಗೊಂಡಿತು. ತದನಂತರ ಮತ್ತೊಬ್ಬ ಶಾಸಕರು ಮಾನ್ಯ ಕಾನೂನು ಸಚಿವರನ್ನು ಕೆ.ಎ.ಟಿ.ಯನ್ನು ಎಲ್ಲಿ ಪ್ರಾರಂಭ ಮಾಡುತ್ತೀರಿ ಎಂದು ಪ್ರಶ್ನೆ ಕೇಳಿದಾಗ, ಅದಕ್ಕೆ ಅವರು ಬಾಯ್‌ತಪ್ಪಿ ಹೇಳಿದರೂ ಅಥವಾ ಖುಷಿಪಡಿಸುವುದಕ್ಕಾಗಿಯೋ, ಅಚಾತುರ್ಯದಿಂದಲೂ ಹೇಳಿದರೋ ಗೊತ್ತಿಲ್ಲ. ಯಾವ ರೀತಿಯಿಂದ ಆಗಿದೆಯೋ ತಿಳಿದಿಲ್ಲ. ನಿಮ್ಮ ಬಾಯಿ